ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 28–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br><br>ಗ್ಲೋಬಲ್ ವೆಲ್‌ನೆಸ್ ಮೀಟ್ – 2016 ರ ಕುರಿತು.<br><br>ಡಾ. ಸತ್ಯಮೂರ್ತಿ ಭಟ್,<br>ಅಧ್ಯಕ್ಷರು,<br>ಕರ್ನಾಟಕ ಆಯುರ್ವೇದ ಮತ್ತು ಯೂನಾನಿ ವೈದ್ಯ ಮಂಡಳಿ,<br>ಬೆಂಗಳೂರು | 29–10–2015<br>ಗುರುವಾರ<br><br>ಬೆಳಿಗ್ಗೆ<br><br>11–00 ಗಂಟೆಗೆ | ಸಭಾಂಗಣ, ಒಂದನೇ ಮಹಡಿ<br><br>ಆಯುಷ್ ನಿರ್ದೇಶನಾಲಯ,<br>ಧನ್ವಂತರಿ ರಸ್ತೆ, ಬೆಂಗಳೂರು–560 009 |
| 2. | ಪತ್ರಿಕಾಗೋಷ್ಠಿ:<br><br>ನೂತನ ತೋಟಗಾರಿಕಾ ಯೋಜನೆಗಳ ಕುರಿತು.<br><br>ಶಾಮನೂರು ಶಿವಶಂಕರಪ್ಪ,<br>ತೋಟಗಾರಿಕೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು. | 29–10–2015<br>ಗುರುವಾರ<br><br>ಬೆಳಿಗ್ಗೆ<br><br>11–30 ಗಂಟೆಗೆ | ಕೊಠಡಿ ಸಂಖ್ಯೆ 334,<br>ಸಮ್ಮೇಳನ ಸಭಾಂಗಣ,<br>ಮೂರನೇ ಮಹಡಿ, ವಿಧಾನಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ವಿಧಾನ ಮಂಡಲ ಸಮಿತಿಯಿಂದ ಪರಿಶೀಲನಾ ಸಭೆ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ನವೆಂಬರ್ 2 ರಂದು ಮೈಸೂರು ಹಾಗೂ ಮಂಡ್ಯ ಜಿಲ್ಲೆಗಳಿಗೆ ಭೇಟಿ ನೀಡಿ, ಜಿಲ್ಲಾ ಮಟ್ಟದ ಪರಿಶೀಲನಾ ಸಭೆಯನ್ನು ನಡೆಸಲಿದೆ.

ನವೆಂಬರ್ 2 ರಂದು ಬೆಳಿಗ್ಗೆ 10-30 ಗಂಟೆಗೆ ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ಮಂಡ್ಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಾಗೂ ಅಂದು ಮಧ್ಯಾಹ್ನ 3-00 ಗಂಟೆಗೆ ಮೈಸೂರು ಜಿಲ್ಲೆಗೆ ಸಂಬಂಧಿಸಿದಂತೆ ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪರಿಶೀಲನಾ ಸಭೆಗಳನ್ನು ನಡೆಸಲಾಗುವುದು ಎಂದು ಕರ್ನಾಟಕ ವಿಧಾನಸಭೆ ಕಾರ್ಯದರ್ಶಿ ಜಯತೀರ್ಥ ಪಿ. ಗಲಗಲಿ ಅವರು ತಿಳಿಸಿದ್ದಾರೆ.

ಪಲ್ಲವಿ;ಬಾಬು:ಜಿಪಿಆರ್.

# ಭ್ರಷ್ಟಾಚಾರದ ವಿರುದ್ಧ ಜಾಗೃತಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಂದ ಪ್ರತಿಜ್ಞಾ ವಿಧಿ ಬೋಧನೆ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸುವ "ಜಾಗೃತಿ ಅರಿವು ಸಪ್ತಾಹ' ದ ಅಂಗವಾಗಿ ಸಾರಿಗೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ರಾಮಲಿಂಗಾರೆಡ್ಡಿ ತಮ್ಮ ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಸಾರ್ವಜನಿಕ ನೌಕರರಾದ ನಾವು ನಮ್ಮ ಎಲ್ಲಾ ಕಾರ್ಯಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಪಾರದರ್ಶಕತೆಯನ್ನು ತರಲು ನಿರಂತರವಾಗಿ ಶ್ರಮಿಸುತ್ತೇವೆ ಎಂದು ಪ್ರತಿಜ್ಞೆ ಮಾಡುತ್ತೇವೆ ಎಂದು ಸಚಿವರು ಸಚಿವಾಲಯದ ಸಿಬ್ಬಂದಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಇ.ವಿ. ರಮಣರೆಡ್ಡಿ, ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಂ.ಆರ್. ಕಾಂಬಳೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಪಿ.ಕೆ. ಸುಬ್ಬಯ್ಯ, ಉಪ ಕಾರ್ಯದರ್ಶಿ, ಮಂಜುನಾಥ್ ಹಾಗೂ ಸಚಿವಾಲಯದ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಪಲ್ಲವಿ/ಬಾಬು/ಕೆಪಿಪಿ/ಕೆಎಂ

**ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ: ಡಿಎಸ್‌ಸಿ 8605, 8613**

<u>ಪ್ರಾಮಾಣಿಕತಾ ಪ್ರತಿಜ್ಞೆ</u>

ಬೆಂಗಳೂರಿನ ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಭ್ರಷ್ಟಾಚಾರ ವಿರುದ್ಧ ಜಾಗೃತ ಅರಿವು ಸಪ್ತಾಹದ ಅಂಗವಾಗಿ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಸಾರಿಗೆ ಸಚಿವ ಶ್ರೀ ರಾಮಲಿಂಗಾ ರೆಡ್ಡಿ ಅವರು ಬುಧವಾರ ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಪ್ರಾಮಾಣಿಕತಾ ಪ್ರತಿಜ್ಞಾ ವಿಧಿ ಬೋಧಿಸಿದರು. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಡಾ ಇ. ವಿ. ರಮಣ ರೆಡ್ಡಿ, ಲೋಕೋಪಯೋಗಿ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಶ್ರೀ ಎಂ. ಆರ್. ಕಾಂಬಳೆ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

**ಚಂದನ ವಾಹಿನಿಯಲ್ಲಿ 'ಜನ-ಮನ'- ಫಲಾನುಭವಿಗಳೊಂದಿಗೆ ಮುಖ್ಯಮಂತ್ರಿಗಳ ಸಂವಾದ**

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)-

ಬೆಂಗಳೂರು ದೂರದರ್ಶನದ ಚಂದನ ವಾಹಿನಿಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ಅಕ್ಟೋಬರ್ 29 ರಂದು ರಾತ್ರಿ 8 ರಿಂದ 9 ಗಂಟೆಯ ವರೆಗೆ ನೇರ ಪ್ರಸಾರವಾಗುವ 'ಜನ-ಮನ' ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನ್ನಭಾಗ್ಯ, ಕ್ಷೀರಭಾಗ್ಯ ಹಾಗೂ ಕ್ಷೀರಧಾರೆ ಯೋಜನೆಗಳ ಫಲಾನುಭವಿಗಳೊಂದಿಗೆ ಸಂವಾದ ಹಾಗೂ ನೇರ ಫೋನ್ ಇನ್ ಕಾರ್ಯಕ್ರಮ ನಡೆಸಿಕೊಡುವರು. ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸ ಬಯಸುವವರು ದೂರವಾಣಿ ಸಂಖ್ಯೆ 080-23542599 ಅಥವಾ 080-23542699 ಕ್ಕೆ ಗೆ ಕರೆ ಮಾಡಿ ಮುಖ್ಯಮಂತ್ರಿಯವರೊಡನೆ ಸಂವಾದ ನಡೆಸಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರಾದ ಎನ್. ಆರ್. ವಿಶುಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಲ್ಲವಿ/ಸಹನ

# ಅನುದಾನರಹಿತ ಹೊಸ ಶಾಲೆ ಪ್ರಾರಂಭಿಸಲು ಆನ್‌ಲೈನ್ ಅರ್ಜಿ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಹೊಸದಾಗಿ 2016–17 ನೇ ಸಾಲಿನಲ್ಲಿ ಅನುದಾನ ರಹಿತ ಪೂರ್ವ ಪ್ರಾಥಮಿಕ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ತೆರೆಯಲು ಉದ್ದೇಶಿಸಿರುವ ಅರ್ಹ ನೋಂದಾಯಿತ ಸಂಸ್ಥೆಗಳು ಆನ್–ಲೈನ್ ( ONLINE) ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಈ ತಂತ್ರಾಂಶವು ಸಾರ್ವಜನಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ schooleducation.kar.nic.in ನಲ್ಲಿ ದಿನಾಂಕ 02–11–2015 ರಿಂದ ದಿನಾಂಕ 15–11–2015 ರ ತನಕ ಲಭ್ಯವಿರುತ್ತದೆ. ಅನ್–ಲೈನ್‌ನಲ್ಲಿ ಭರ್ತಿಮಾಡಿ ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಪ್ರಿಂಟ್ ತೆಗೆದು ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 20–11–2015 ರೊಳಗೆ ಆಯಾ ಕ್ಷೇತ್ರ ಶಿಕ್ಷಣದಿಕಾರಿಗಳ ಕಚೇರಿಗೆ ಸಲ್ಲಿಸಿ ಅರ್ಜಿಯ ಸ್ಥಿತಿಯನ್ನು ಆನ್–ಲೈನ್ ತಂತ್ರಾಂಶದ ವೀಕ್ಷಿಸಬಹುದಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಲ್ಲವಿ:ಬಾಬು/ಕೆಎಂ

# ವೆಬ್‌ಸೈಟ್‌ನಲ್ಲಿ ಪಠ್ಯಪುಸ್ತಕ ಅಳವಡಿಕೆ

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)–

ಸಾರ್ವಜನಿಕ ಶಿಕ್ಷಣ ಇಲಾಖೆಯು, ಕರ್ನಾಟಕ ಪಠ್ಯಪುಸ್ತಕ ಸಂಘವು ವಿಭಿನ್ನ ಸಾಮರ್ಥವುಳ್ಳ/ಕಲಿಕಾ ನ್ಯೂನ್ಯತೆವುಳ್ಳ ಮಕ್ಕಳ ಪಠ್ಯಪುಸ್ತಕಗಳನ್ನು ವೆಬ್‌ಸೈಟ್‌ನಲ್ಲಿ ಅಳವಡಿಸಿದೆ. ಹತ್ತನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿಭಿನ್ನ ಸಾಮಥ್ಯವುಳ್ಳ/ಕಲಿಕಾ ನ್ಯೂನ್ಯತೆವುಳ್ಳ ಮಕ್ಕಳು ಗಣಿತ ಮತ್ತು ವಿಜ್ಞಾನ ವಿಷಯಗಳಿಗೆ ಪರ್ಯಾಯವಾಗಿ ಅಧ್ಯಯನ ಮಾಡಬಹುದಾದ ಆಂಗ್ಲ ಮಾಧ್ಯಮದ Sociology, Policital Science and Economics ಪಠ್ಯಪುಸ್ತಕಗಳನ್ನು www.ktbs.kar.nic.in ನಲ್ಲಿ ಅಳವಡಿಸಲಾಗಿದೆ ಎಂದು ಕರ್ನಾಟಕ ಪಠ್ಯಪುಸ್ತಕ ಸಂಘದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ಪಲ್ಲವಿ/ಕೆಎಂ